## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 881 |
| ಸದಸ್ಯರ ಹೆಸರು | : | ಶ್ರೀ ಅಡಗೂರ್ ಹೆಚ್.ವಿಶ್ವನಾಥ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 24.07.2024 |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು ಕಡಬಾ ಹೋಬಳಿ, ಬಿರೇಶ್ವರಪುರ ಗ್ರಾಮದ ವ್ಯಾಪ್ತಿಗೆ ಸೇರಿದ ಸರ್ವೆ ನಂ.96 ರಲ್ಲಿ ಗೋಮಾಳವನ್ನು ಅಕ್ರಮವಾಗಿ ಸಾಗುವಳಿ ಮಾಡಿರುವವರಿಂದ ತೆರವುಗೊಳಿಸಿ, ಸದರಿ ಗೋಮಾಳವನ್ನು ಶಾಶ್ವತವಾಗಿ ಮೀಸಲಿಡಲು ಕ್ರಮ ವಹಿಸಲಾಗಿದೆಯೇ; | ಮಂಡ್ಯ ಜಿಲ್ಲೆಯ ನಾಗಮಂಗಲ ತಾಲ್ಲೂಕಿನ ಬೀರೇಶ್ವರಪುರ ಗ್ರಾಮದ ಸ.ನಂ. 96 ರ ಜಮೀನಿಗೆ ಸಂಬಂಧಿಸಿದಂತೆ ನಮೂನೆ 53 ರಡಿ 10 ಅರ್ಜಿ ಸಲ್ಲಿಕೆಯಾಗಿರುತ್ತದೆ. ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 45 ಎಲ್‌ಜಿಪಿ 2023, ದಿನಾಂಕ: 01.12.2023 ರಲ್ಲಿನ ನಿರ್ದೇಶನಗಳಂತೆ ಸಲ್ಲಿಕೆಯಾಗಿರುವ ಅರ್ಜಿಗಳನ್ನು ಅರ್ಹವಿದ್ದಲ್ಲಿ ಮಂಜೂರಾತಿಗಾಗಿ ಬಗರ್ ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿ ಮುಂದೆ ಮಂಡಿಸಲು ಕ್ರಮವಹಿಸಲಾಗುವುದು ಹಾಗೂ ಅರ್ಹವಿಲ್ಲದ ಅರ್ಜಿಗಳನ್ನು ಜಿಲ್ಲಾಧಿಕಾರಿಗಳಿಗೆ ವರದಿ ಸಲ್ಲಿಸಿ ಸದರಿ ಅರ್ಜಿಗಳನ್ನು ತಿರಸ್ಕರಿಸಲು ನಿಯಮಾನುಸಾರ ಕ್ರಮವಹಿಸಲಾಗುತ್ತದೆ. |
| (ಆ) | ಕಳೆದ ಅಧಿವೇಶನದಲ್ಲಿ ಸರ್ಕಾರವು ತೆರವುಗೊಳಿಸಲಾಗುವುದೆಂದು ಭವಿಷ್ಯ ನೀಡಿದ್ದಲ್ಲಿ ಸದರಿ ಗೋಮಾಳವನ್ನು ಅಕ್ರಮವಾಗಿ ಸಾಗುವಳಿ ಮಾಡುವವರಿಂದ ಇದುವರೆವಿಗೂ ತೆರವುಗೊಳಿಸದಿರಲು ಕಾರಣಗಳೇನು? | ಮತದಾರರ ಪಟ್ಟಿಗಳ ಸಂಕ್ಷಿಪ್ತ ಪರಿಷ್ಕರಣೆ 2024, ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ಹಾಗೂ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆ 2024 ರ ಹಿನ್ನೆಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದ್ದ ಕಾರಣ ಅರ್ಜಿಗಳ ಬಗ್ಗೆ ಕ್ರಮವಹಿಸಲು ಸಾಧ್ಯವಾಗಿರುವುದಿಲ್ಲ. |
| (ಇ) | ಈ ಗೋಮಾಳವನ್ನು ಅಕ್ರಮವಾಗಿ ಸಾಗುವಳಿ ಮಾಡಿರುವ/ ಅಕ್ರಮಿಸಿಕೊಂಡಿರುವವರಿಂದ ತೆರವುಗೊಳಿಸಲು ಯಾವ ಕಾಲಮಿತಿಯಲ್ಲಿ ಸರ್ಕಾರ ಕ್ರಮವಹಿಸುವುದು; | ಮಂಡ್ಯ ಜಿಲ್ಲೆಯ ನಾಗಮಂಗಲ ತಾಲ್ಲೂಕಿನ ಬೀರೇಶ್ವರಪುರ ಗ್ರಾಮದ ಸ.ನಂ. 96 ರ ಜಮೀನಿಗೆ ಸಂಬಂಧಿಸಿದಂತೆ ನಮೂನೆ 53 ರಡಿ 10 ಅರ್ಜಿಗಳು ಸಲ್ಲಿಕೆಯಾಗಿರುವುದರಿಂದ ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 45 ಎಲ್‌ಜಿಪಿ 2023, ದಿನಾಂಕ: 01.12.2023ರ ನಿರ್ದೇಶನಗಳಂತೆ ಅರ್ಜಿಗಳ ಅರ್ಹತೆ/ಅನರ್ಹತೆ ಬಗ್ಗೆ ಪರಿಶೀಲಿಸಿ ಕ್ರಮವಹಿಸಲಾಗುತ್ತದೆ. |
| (ಈ) | ಗೋಮಾಳವನ್ನು ಅಕ್ರಮವಾಗಿ ಸಾಗುವಳಿ ಮಾಡುತ್ತಿರುವ ಭೂಗಳ್ಳರ ವಿರುದ್ಧ ಯಾವುದೇ ಕ್ರಮಕೈಗೊಳ್ಳದ ತಹಶೀಲ್ದಾರ್ ನಾಗಮಂಗಲ ಕಂದಾಯಾಧಿಕಾರಿ/ಕಂದಾಯ ನಿರೀಕ್ಷಕ ಹಾಗೂ ಗ್ರಾಮ ಆಡಳಿತಾಧಿಕಾರಿಗಳ ವಿರುದ್ಧ ಯಾವ ಕ್ರಮಕೈಗೊಳ್ಳಲಾಗುವುದು? | |

(ಕಡತ ಸಂಖ್ಯೆ:ಕಂಇ 24 ಎಲ್‌ಜಿವ್ಯೆ 2024)

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು